**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ಶಿಕ್ಷಕ/ಶಿಕ್ಷಕಿಯರಿಗೆ ಹಾಲಿ ನೀಡುತ್ತಿರುವ ವೇತನವನ್ನು ಪರಿಷ್ಕರಿಸಿ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಏಕ ಕಡತ ಸಂಖ್ಯೆ: ಕವಶಿಸಸ/ಆಡಳಿತ/ಸಿಆರ್-40/2017-18 ದಿನಾಂಕ: 05-03-2018.

****

**ಪ್ರಸ್ತಾವನೆ:-**

ಕನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಲ್ಲಿ ವ್ಯಾಪ್ತಿಯಲ್ಲಿ ಬರುವ ವಸತಿ ಶಾಲೆಗಳಲ್ಲಿ ಮಂಜೂರಾಗಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರ ಹುದ್ದೆ ಖಾಲಿ ಇದ್ದು, ಹೊರಗುತ್ತಿಗೆಯಿಂದ ನೇಮಕಗೊಂಡ ಪ್ರಾಂಶುಪಾಲರಿಗೆ ಮಾಹೆಯಾನ ರೂ.8,000/- ಗಳಿಂದ ರೂ.12,000/- ಹಾಗೂ ಶಿಕ್ಷಕರಿಗೆ ರೂ.6,600/- ರಿಂದ 10,000/- ವರೆಗೆ ಹೆಚ್ಚಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ 70 ನೇ ಆಡಳಿತ ಮಂಡಳಿಯ ಸಭೆಯಲ್ಲಿ ಅನುಮೋದಿಸಿದ್ದು, ಆಡಳಿತ ಮಂಡಳಿಯ ಅನುಮೋದನೆಯಂತೆ ವೇತನ ಹೆಚ್ಚಿಸಲು ಆದೇಶ ಹೊರಡಿಸುವಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಮೇಲೆ ಓದಲಾದ ದಿನಾಂಕ:05-03-2018 ರ ಏಕ ಕಡತದಲ್ಲಿ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಸಕಇ 245 ಮೊದೇಶಾ 2018, ಬೆಂಗಳೂರು ದಿನಾಂಕ:06-03-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಅಟಲ್ ಬಿಹಾರಿ ವಾಜಪೇಯಿ/ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆಯಿಂದ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರಿಗೆ ಮಾಹೆಯಾನ ರೂ.8,000/- ಗಳಿಂದ ರೂ.12,000/- ಹಾಗೂ ಶಿಕ್ಷಕರಿಗೆ ರೂ.6,600/- ರಿಂದ 10,000/- ವರೆಗೆ ವೇತನ ನಿಗಧಿಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಸುಮಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು (ಎ & ಇ ಲೆಕ್ಕ ಪರಿಶೋಧನೆ-1, 2) ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.

---2

3. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

*****